Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 18-12-2022

**ಪತ್ರಿಕಾ ಪ್ರಕಟಣೆ:**

# ಸ್ಮಾರ್ಟ್ ಸಿಟಿ ಉಪನ್ಯಾಸ ಕಾರ್ಯಕ್ರಮ ಯಶಸ್ವಿ

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದಲ್ಲಿ ಸ್ಮಾರ್ಟ್ ಸಿಟಿ ಮತ್ತು ಐ. ಒ. ಟಿ. ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಡಿಸೆಂಬರ್ 16ರಂದು ಹಮ್ಮಿಕೊಳ್ಳಲಾಗಿತ್ತು. ಹುಬ್ಬಳ್ಳಿ ಧಾರವಾಡ ಸ್ಮಾರ್ಟ್ ಸಿಟಿ ವಿಭಾಗದ ನಿವೃತ್ತ ಮುಖ್ಯ ಅಭಿಯಂತರರಾದ ಶ್ರೀ. ಎಂ ನಾರಾಯಣ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾತನಾಡುತ್ತ ಸ್ಮಾರ್ಟ್ ಸಿಟಿಯ ಯೋಜನೆ ಹಾಗೂ ಪರಿಕಲ್ಪನೆಯನ್ನು ತೆರೆದಿಟ್ಟರು. ಸ್ಮಾರ್ಟ್ ಸಿಟಿಯ ಯೋಜನೆಯನ್ನು ರೂಪಿಸುವುದು ಹೇಗೆ? ಇಂಟರ್ನೆಟ್ ಆಫ್ ಥಿಂಗ್ಸ್ (ಐ. ಒ. ಟಿ) ನಿಂದ ನಗರಗಳನ್ನು ಅಭಿವೃದ್ಧಿಪಡಿಸುವುದನ್ನು ವಿವರಿಸುತ್ತ,ಇದೇ ಸಂದರ್ಭದಲ್ಲಿ ತಮ್ಮ ವೃತ್ತಿ ಜೀವನದ ಅನುಭವಗಳನ್ನು ಹಂಚಿಕೊಂಡರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ ಅವರು ಸ್ಮಾರ್ಟ್ ಸಿಟಿ ಯೋಜನೆಗಳಲ್ಲಿ ಸಿವಿಲ್ ಹಾಗೂ ಎಲೆಕ್ಟ್ರಾನಿಕ್ಸ್ ಅಭಿಯಂತರರಿಗೆ ಹೇರಳ ಅವಕಾಶಗಳಿವೆ ಎಂದು ಹೇಳಿದರು.

ಸಿವಿಲ್ ವಿಭಾಗದ ಮುಖ್ಯಸ್ಥರಾದ ಪ್ರೊ. ಹರ್ಷ ಅ ಜಾಧವ ಸ್ವಾಗತಿಸಿದರು. ಡಾ. ಆಶಿಕ್ ಬಳ್ಳಾರಿ ವಂದಿಸಿದರು. ಪ್ರೊ. ಭಾನುಪ್ರಿಯ ನಿರೂಪಿಸಿದರು. ಮಹಾವಿದ್ಯಾಲಯದ ಸಿವಿಲ್ ವಿಭಾಗವು ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಸಿವಿಲ್ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ 150ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರಾಂಶುಪಾಲರು

**Principal**
**KLS Vishwanathrao Deshpande Institute of Technology, Haliyal**



KLS VDIT , HALIYAL
Transforming through Technology
Department of Civil Engineering
as part of
25 Technical Talk Series,
VTU Silver Jubilee Year
presents
Talk on
"SMART CITY AND IoT"
10/12/2022
Resource Person:
Er. M. Narayan,
Rtd. Chief Engineer,
Hubli-Dharwad Smart City
Freeze
KLS
VDI